Akashvani: Bangalore
National Bulletin In Kannada
22.08.2026: 7.35AM
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**********

ಮುಖ್ಯಾಂಶಗಳು :

- ವ್ಯವಸ್ಥೆಯ ಸುಧಾರಣೆ ಮತ್ತು ಬಲವರ್ಧನೆಗೆ ಯುವಜನರ ತಾಳ್ಮೆ, ಜವಾಬ್ದಾರಿ ಅಗತ್ಯ - ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್
- ಸರ್ಕಾರದ ನೀತಿಗಳು ಜನಪರ ಹಾಗೂ ಅಭಿವೃದ್ಧಿ ಬೆಳವಣಿಗೆ ಪರ - ಪ್ರಧಾನಿ ನರೇಂದ್ರ ಮೋದಿ
- ಸೆಪ್ಟೆಂಬರ್ ೫ ರಂದು ರಾಷ್ಟ್ರಪತಿ ಅವರಿಂದ ದೆಹಲಿಯಲ್ಲಿ ರಾಷ್ಟ್ರೀಯ ಶಿಕ್ಷಕರ ಪ್ರಶಸ್ತಿ ಪ್ರದಾನ
- ವಿಶಾಖಪಟ್ಟಣದಲ್ಲಿಂದು ಬ್ರಿಕ್ಸ್ ಯುವ ಸಚಿವರ ಸಭೆ; ನಾಳೆ ಕ್ರೀಡಾ ಸಚಿವರ ಸಭೆ
- ಬಿಡಬ್ಲ್ಯೂಎಫ್ ಬ್ಯಾಡ್ಮಿಂಟನ್ ವಿಶ್ವ ಚಾಂಪಿಯನ್‌ಶಿಪ್; ಭಾರತದ ತ್ರೀಸಾ ಜಾಲಿ ಮತ್ತು ಗಾಯತ್ರಿ ಗೋಪಿಚಂದ್ ಜೋಡಿ ಸೆಮಿಫೈನಲ್ಸ್‌ನಲ್ಲಿಂದು ಸೆಣಸು

**********

ಭಾರತದ ಸಾಂಸ್ಕೃತಿಕ ಬೇರುಗಳನ್ನು ಸಂರಕ್ಷಿಸುವ ಮಹತ್ವವನ್ನು ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಪ್ರತಿಪಾದಿಸಿದ್ದಾರೆ. ನಿನ್ನೆ ದೆಹಲಿಯಲ್ಲಿ ನಡೆದ ಅಂತರ-ಹೃದಯ ಬಂಧ - ಮಲ್ಹಾರ್ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಅವರು, ಸಂಸ್ಕೃತಿಯು ದೇಶವನ್ನು ಒಂದುಗೂಡಿಸುವ ಬಲವಾದ ಬಂಧವಾಗಿದೆ. ಯುವ ಜನರು, ವಿಶೇಷವಾಗಿ ಜೆನ್ ಝಡ್, ವ್ಯವಸ್ಥೆಯನ್ನು ಸುಧಾರಿಸಲು ಮತ್ತು ಬಲಪಡಿಸಲು ತಾಳ್ಮೆ ಮತ್ತು ಜವಾಬ್ದಾರಿಯೊಂದಿಗೆ ಕೊಡುಗೆ ನೀಡಬೇಕೆಂದು ಕರೆ ನೀಡಿದರು. ಯುವಜನರನ್ನು ಭಾರತದ ವೈವಿಧ್ಯಮಯ ಸಾಂಸ್ಕೃತಿಕ ಸಂಪ್ರದಾಯಗಳಿಗೆ ಒಡ್ಡಿಕೊಳ್ಳುವ ಮತ್ತು ಅವರ ರಾಷ್ಟ್ರಕ್ಕೆ ಸೇರಿದ ಭಾವನೆಯನ್ನು ಬಲಪಡಿಸುವ ಉಪಕ್ರಮಗಳ ಮಹvತ್ವದ ಬಗ್ಗೆ ಪ್ರತಿಪಾದಿಸಿದ ಅವರು, ಭಾರತದ ಶಾಸ್ತ್ರೀಯ ಸಂಗೀತ ಸಂಪ್ರದಾಯಗಳು ಶತಮಾನಗಳಿಂದ ಉಳಿದುಕೊಂಡಿವೆ.

ಸಂಗೀತ ಶಾಂತಿಯನ್ನು ತರುತ್ತದೆ ಹಾಗೂ ಪ್ರದೇಶಗಳು, ಭಾಷೆಗಳು ಮತ್ತು ಸಂಸ್ಕೃತಿಗಳಾದ್ಯಂತ ಜನರನ್ನು ಸಂಪರ್ಕಿಸುತ್ತದೆ ಎಂದು ಉಪರಾಷ್ಟ್ರಪತಿ ಹೇಳಿದರು.

**********

ಸುಧಾರಣೆಗಳು ತಮ್ಮ ಸರ್ಕಾರದ ಬದ್ಧತೆ ಮತ್ತು ದೃಢ ನಿಶ್ಚಯವಾಗಿದ್ದು, ನೀತಿಗಳು ಜನಪರ, ಬೆಳವಣಿಗೆ ಮತ್ತು ಅಭಿವೃದ್ಧಿ ಪರವಾಗಿವೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ನಿನ್ನೆ ಸಂಜೆ ದೆಹಲಿಯಲ್ಲಿ ನಡೆದ ಎಕನಾಮಿಕ್ ಟೈಮ್ಸ್ ವರ್ಲ್ಡ್ ಲೀಡರ್ಸ್ ಫೋರಂ ಅನ್ನು ಉದ್ದೇಶಿಸಿ ಮಾತನಾಡಿದ ಅವರು, ತಮ್ಮ ಸರ್ಕಾರ, ಸುಧಾರಣೆಗಳಿಗೆ ಸ್ಪಷ್ಟವಾದ ಮಾರ್ಗಸೂಚಿಯನ್ನು ರಚಿಸಿದೆ, ಪ್ರಾಥಮಿಕ ಗಮನವು ಆಡಳಿತ ಮಟ್ಟದಲ್ಲಿ ಸುಧಾರಣೆಗಳ ಕುರಿತಾಗಿದೆ. ದೇಶದ ಭವಿಷ್ಯವನ್ನು ಸುರಕ್ಷಿತಗೊಳಿಸಲು ಭಾರತ ನೀತಿ ಮಟ್ಟದಲ್ಲಿ ಮುಂದಿನ ಪೀಳಿಗೆಯ ಸುಧಾರಣೆಗಳನ್ನು ಕೈಗೊಳ್ಳುತ್ತಿದೆ ಎಂದು ಹೇಳಿದರು. ತಮ್ಮ ಸರ್ಕಾರ ಕೇವಲ ನಿಯಮಗಳನ್ನು ಬದಲಾಯಿಸುತ್ತಿಲ್ಲ, ಆದರೆ ಅವುಗಳ ಹಿಂದಿನ ಸಂಪೂರ್ಣ ತತ್ವಶಾಸ್ತ್ರವನ್ನು ಬದಲಾಯಿಸುತ್ತಿದೆ. ಹಿಂದಿನ ಸರ್ಕಾರಗಳು ಅನುಸರಿಸುತ್ತಿದ್ದ "ಉತ್ಪಾದನೆ ಸಂಬಂಧಿತ ಶಿಕ್ಷೆ" ಮಾದರಿಯಿಂದ ಭಾರತ ಇದೀಗ ಉತ್ಪಾದನೆ ಸಂಬಂಧಿತ ಪ್ರೋತ್ಸಾಹಕ ಮಾದರಿ ಅನುಸರಿಸುತ್ತಿದೆ. ಹಿಂದಿನ ಸರ್ಕಾರಗಳ ನೀತಿಯಂತೆ ಜನರು ಮೂಲಭೂತ ಅಗತ್ಯಗಳಿಗೂ ಸರ್ಕಾರವನ್ನು ಅವಲಂಬಿಸಬೇಕಾಗಿತ್ತು. ಹಿಂದಿನ ಸರ್ಕಾರಗಳ ಆಡಳಿತದಲ್ಲಿ ಪರವಾನಗಿ, ನಿರುದ್ಯೋಗಕ್ಕೆ ಕಾರಣವಾಗಿದೆ. ಸರ್ಕಾರದ ಉತ್ಪಾದನೆಗೆ ಸಂಬಂಧಿಸಿದ ಪ್ರೋತ್ಸಾಹಕ ಮಾದರಿಯು ಹೊಸ ಅವಕಾಶಗಳನ್ನು ಸೃಷ್ಟಿಸುತ್ತಿದೆ ಎಂದು ಪ್ರಧಾನಿ ಹೇಳಿದರು. ಜಾಗತಿಕ ಆರ್ಥಿಕ ಪರಿಸರದ ಕುರಿತಂತೆ ಪ್ರಸ್ತಾಪಿಸಿದ ಅವರು, ಸಂಪನ್ಮೂಲಗಳ ಸಶಸ್ತ್ರೀಕರಣ ಮತ್ತು ಹೆಚ್ಚುತ್ತಿರುವ ಅಪನಂಬಿಕೆ ಹೊಸ ಸವಾಲುಗಳನ್ನು ಸೃಷ್ಟಿಸುತ್ತಿದೆ. ಇಂತಹ ಸಂದರ್ಭಗಳಲ್ಲಿಯೂ ಜಗತ್ತು ಭಾರತವನ್ನು ಭರವಸೆ ಮತ್ತು ಬೆಳವಣಿಗೆಯ ಉಜ್ವಲ ತಾಣವಾಗಿ ನೋಡುತ್ತಿದೆ ಎಂದು ಅವರು ಹೇಳಿದರು. ಭಾರತ ವಿಶ್ವದ ಅತ್ಯಂತ ವೇಗವಾಗಿ ಬೆಳೆಯುತ್ತಿರುವ ಪ್ರಮುಖ ಆರ್ಥಿಕತೆಯಾಗಿ ಮುಂದುವರಿಯಲಿದೆ ಎಂದು ಅಂತಾರಾಷ್ಟ್ರೀಯ ಹಣಕಾಸು ನಿಧಿ ಮುನ್ಸೂಚನೆ ನೀಡಿದೆ. ಭಾರತು ತನ್ನ ಅಭಿವೃದ್ಧಿಗೆ ವೇಗ ನೀಡುವ ಕ್ರಮಗಳನ್ನು ತೆಗೆದುಕೊಳ್ಳುತ್ತಿದೆ ಎಂದು ಅವರು ಹೇಳಿದರು. ಇತ್ತೀಚಿನ ಜಾಗತಿಕ ಬೆಳವಣಿಗೆಗಳು ದೇಶಗಳು ಮತ್ತು ಆರ್ಥಿಕತೆಗಳ ಪರಸ್ಪರ ಸಂಬಂಧವನ್ನು ಪ್ರದರ್ಶಿಸಿವೆ.

ಭಾರತ ಸದಾ ಸಾಮೂಹಿಕ ಪ್ರಗತಿಯ ಮನೋಭಾವದೊಂದಿಗೆ ಮುಂದುವರೆದಿದೆ. ನಾಗರಿಕರ ಅಗತ್ಯತೆಗಳು ಮತ್ತು ದೇಶದ ಅಭಿವೃದ್ಧಿಯ ಆದ್ಯತೆಗಳನ್ನು ಕೇಂದ್ರದಲ್ಲಿಟ್ಟುಕೊಂಡು ಸರ್ಕಾರ ನೀತಿಗಳನ್ನು ರೂಪಿಸುತ್ತಿದೆ ಎಂದು ಅವರು ಹೇಳಿದರು.

**********

ರಾಷ್ಟ್ರಪತಿ ದ್ರೌಪದಿ ಮುರ್ಮು ಮುಂದಿನ ತಿಂಗಳ ೫ ರಂದು ದೆಹಲಿಯ ವಿಜ್ಞಾನ ಭವನದಲ್ಲಿ ೪೮ ಶಾಲಾ ಶಿಕ್ಷಕರಿಗೆ ರಾಷ್ಟ್ರೀಯ ಶಿಕ್ಷಕರ ಪ್ರಶಸ್ತಿಗಳನ್ನು ಪ್ರದಾನ ಮಾಡಲಿದ್ದಾರೆ. ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯಿಂದ ಜಿಲ್ಲಾ, ರಾಜ್ಯ ಮತ್ತು ರಾಷ್ಟ್ರೀಯ ಮಟ್ಟದಲ್ಲಿ ಮೂರು ಹಂತದ ಆಯ್ಕೆ ಪ್ರಕ್ರಿಯೆಯ ಮೂಲಕ ಶಾಲಾ ಶಿಕ್ಷಕರನ್ನು ಆಯ್ಕೆ ಮಾಡಲಾಗಿದೆ ಎಂದು ಶಿಕ್ಷಣ ಸಚಿವಾಲಯ ತಿಳಿಸಿದೆ. ೨೭ ರಾಜ್ಯಗಳು, ೭ ಕೇಂದ್ರಾಡಳಿತ ಪ್ರದೇಶಗಳು ಮತ್ತು ಕೇಂದ್ರ ಸರ್ಕಾರದ ೬ ಸಂಸ್ಥೆಗಳಿಗೆ ಸೇರಿದ ೪೮ ಶಿಕ್ಷಿಕರು ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ. ಆಯ್ಕೆಯಾದ ೪೮ ಶಾಲಾ ಶಿಕ್ಷಕರಲ್ಲಿ ೨೬ ಪುರುಷರು ಮತ್ತು ೨೨ ಮಹಿಳೆಯರು ಸೇರಿದ್ದಾರೆ. ಈ ವರ್ಷದ ಜೂನ್ ೧೫ ರಿಂದ ಜುಲೈ ೨೦ ರವರೆಗೆ ಶಿಕ್ಷಣ ಸಚಿವಾಲಯದ ಪೋರ್ಟಲ್ ಟಿಚಿಣioಟಿಚಿಟಚಿತಿಚಿಡಿಜsಣoಣeಚಿಛಿheಡಿs.eಜuಛಿಚಿಣioಟಿ.gov.iಟಿ ಮೂಲಕ ರಾಷ್ಟ್ರೀಯ ಶಿಕ್ಷಕರ ಪ್ರಶಸ್ತಿಗಳು ೨೦೨೬ಕ್ಕೆ ಅರ್ಹ ಶಿಕ್ಷಕರಿಂದ ಆನ್‌ಲೈನ್ ಸ್ವಯಂ ನಾಮನಿರ್ದೇಶನಗಳನ್ನು ಆಹ್ವಾನಿಸಲಾಗಿದೆ ಎಂದು ಸಚಿವಾಲಯ ತಿಳಿಸಿದೆ. ಈ ಕಾರ್ಯಕ್ರಮವನ್ನು ದೂರದರ್ಶನ ಮತ್ತು ಶಿಕ್ಷಣ ಸಚಿವಾಲಯದ ಸ್ವಯಂ ಪ್ರಭಾ ಚಾನೆಲ್‌ಗಳಲ್ಲಿ ನೇರ ಪ್ರಸಾರ ಮಾಡಲಾಗುವುದು.

**********

ಭಾರತದ ಅಧ್ಯಕ್ಷತೆಯಲ್ಲಿ ಆಂಧ್ರಪ್ರದೇಶದ ವಿಶಾಖಪಟ್ಟಣದಲ್ಲಿ ಬ್ರಿಕ್ಸ್ ಯುವ ಸಚಿವರ ಸಭೆ ಮತ್ತು ಬ್ರಿಕ್ಸ್ ಕ್ರೀಡಾ ಸಚಿವರ ಸಭೆ ನಡೆಯಲಿದೆ. ಬ್ರಿಕ್ಸ್ ಯುವ ಸಚಿವರ ಸಭೆ ಇಂದು ನಡೆಯಲಿದ್ದು, ಬ್ರಿಕ್ಸ್ ಕ್ರೀಡಾ ಸಚಿವರ ಸಭೆ ನಾಳೆ ನಡೆಯಲಿದೆ. ಕೇಂದ್ರ ಯುವ ವ್ಯವಹಾರ ಮತ್ತು ಕ್ರೀಡಾ ಸಚಿವ ಡಾ.ಮನ್ಸುಖ್ ಮಾಂಡವಿಯಾ ಅಧ್ಯಕ್ಷತೆಯಲ್ಲಿ ಸಭೆ ನಡೆಯಲಿದ್ದು, ಕೇಂದ್ರ ಯುವ ವ್ಯವಹಾರ ಮತ್ತು ಕ್ರೀಡಾ ಖಾತೆ ರಾಜ್ಯ ಸಚಿವೆ ರಕ್ಷಾ ಖಡ್ಸೆ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಬ್ರಿಕ್ಸ್ ಯುವ ಸಚಿವರ ಸಭೆಯು, ಯುವ ಅಭಿವೃದ್ಧಿ ಮತ್ತು ಸಬಲೀಕರಣದಲ್ಲಿ ಸಹಕಾರವನ್ನು ಬಲಪಡಿಸುವತ್ತ ಗಮನಹರಿಸಲಿದ್ದು, ಶಿಕ್ಷಣ, ಕೌಶಲ್ಯ, ಉದ್ಯಮಶೀಲತೆ, ಯೋಗಕ್ಷೇಮ ಮತ್ತು ಸುಸ್ಥಿರ ಅಭಿವೃದ್ಧಿಯನ್ನು ಒಳಗೊಂಡ ಚರ್ಚೆಗಳು ನಡೆಯಲಿವೆ.

ಬ್ರಿಕ್ಸ್ ಕ್ರೀಡಾ ಸಚಿವರ ಸಭೆಯು ಬ್ರಿಕ್ಸ್ ಸದಸ್ಯ ರಾಷ್ಟ್ರಗಳ ಕ್ರೀಡಾ ಸಚಿವರು ಮತ್ತು ನಿಯೋಗದ ಮುಖ್ಯಸ್ಥರನ್ನು ಒಟ್ಟುಗೂಡಿಸಲಿದೆ. ಕ್ರೀಡೆಯಲ್ಲಿ ಸಹಕಾರವನ್ನು ಬಲಪಡಿಸುವ ಬ್ರಿಕ್ಸ್ ಸದಸ್ಯ ರಾಷ್ಟ್ರಗಳ ಬದ್ಧತೆಯನ್ನು ಇದು ಪುನರುಚ್ಚರಿಸುತ್ತದೆ ಎಂದು ಕೇಂದ್ರ ಯುವ ವ್ಯವಹಾರ ಮತ್ತು ಕ್ರೀಡಾ ಸಚಿವಾಲಯ ತಿಳಿಸಿದೆ.

**********

ಭಾರತದ ಅಧ್ಯಕ್ಷತೆಯಲ್ಲಿ ಜೈಪುರದಲ್ಲಿ ನಿನ್ನೆ ನಡೆದ ಬ್ರಿಕ್ಸ್ ಪ್ರವಾಸೋದ್ಯಮ ಸಚಿವರ ಸಭೆಯು ಜೈಪುರ ನಿರ್ಣಯವನ್ನು ಸರ್ವಾನುಮತದಿಂದ ಅಂಗೀಕರಿಸುವುದರೊಂದಿಗೆ ಮುಕ್ತಾಯವಾಯಿತು, ಇದು ಬ್ರಿಕ್ಸ್ ಸದಸ್ಯ ರಾಷ್ಟ್ರಗಳ ನಡುವೆ ಪ್ರವಾಸೋದ್ಯಮ ಸಹಕಾರವನ್ನು ಬಲಪಡಿಸುವ ಚೌಕಟ್ಟನ್ನು ಒದಗಿಸುತ್ತದೆ. ಪ್ರವಾಸೋದ್ಯಮದಲ್ಲಿ ಕೃತಕ ಬುದ್ಧಿಮತ್ತೆಯ ಬಳಕೆ, ಸುಸ್ಥಿರ ಪ್ರವಾಸೋದ್ಯಮ ವಿಧಾನಗಳು, ಕೌಶಲ್ಯಾಭಿವೃದ್ಧಿ ಮತ್ತು ಸುಗಮ ಪ್ರಯಾಣ ಸೌಲಭ್ಯ ಸೇರಿದಂತೆ ಸಹಕಾರದ ಪ್ರಮುಖ ಕ್ಷೇತ್ರಗಳನ್ನು ನಿರ್ಣಯ ಒಳಗೊಂಡಿದೆ. ಕೇಂದ್ರ ಸಂಸ್ಕೃತಿ ಮತ್ತು ಪ್ರವಾಸೋದ್ಯಮ ಸಚಿವ ಗಜೇಂದ್ರ ಸಿಂಗ್ ಶೇಖಾವತ್ ಸಭೆಯ ಅಧ್ಯಕ್ಷತೆ ವಹಿಸಿದ್ದರು. ಸ್ಥಿತಿಸ್ಥಾಪಕತ್ವ, ನಾವೀನ್ಯತೆ, ಸಹಕಾರ ಮತ್ತು ಸುಸ್ಥಿರತೆಗಾಗಿ ನಿರ್ಮಾಣ" ಎಂಬ ವಿಷಯದ ಅಡಿಯಲ್ಲಿ ಪ್ರವಾಸೋದ್ಯಮ ಕುರಿತ ಚರ್ಚೆಯನ್ನು ಮುಂದುವರಿಸಲಾಯಿತು. ಸಭೆಯನ್ನುದ್ದೇಶಿಸಿ ಮಾತನಾಡಿದ ಗಜೇಂದ್ರ ಸಿಂಗ್ ಶೇಖಾವತ್, ೨೦೪೭ರ ವೇಳೆಗೆ ಭಾರತದ ವಿಕಸಿತ ಭಾರತ ಪ್ರಯಾಣದಲ್ಲಿ ಪ್ರವಾಸೋದ್ಯಮವು ಪ್ರಮುಖ ಪಾತ್ರ ವಹಿಸುತ್ತದೆ ಮತ್ತು ಪ್ರಮುಖ ನಗರ ಕೇಂದ್ರಗಳನ್ನು ಮೀರಿ ಪಟ್ಟಣಗಳು, ಹಳ್ಳಿಗಳು ಮತ್ತು ದೂರದ ಪ್ರದೇಶಗಳಿಗೆ ಆರ್ಥಿಕ ಬೆಳವಣಿಗೆಯನ್ನು ವಿಸ್ತರಿಸುವ ಸಾಮರ್ಥ್ಯವನ್ನು ಹೊಂದಿದೆ ಎಂದು ಹೇಳಿದರು. ಸಭೆಯಲ್ಲಿ ಒಂಬತ್ತು ಬ್ರಿಕ್ಸ್ ಸದಸ್ಯ ರಾಷ್ಟ್ರಗಳ ಪ್ರತಿನಿಧಿಗಳು ಭಾಗವಹಿಸಿದ್ದರು. ಸಚಿವರ ಸಭೆಯ ಹೊರತಾಗಿ, ಪ್ರವಾಸೋದ್ಯಮ ಸಹಕಾರವನ್ನು ಮತ್ತಷ್ಟು ಮುನ್ನಡೆಸಲು ಬ್ರೆಜಿಲ್, ಇರಾನ್, ದಕ್ಷಿಣ ಆಫ್ರಿಕಾ ಮತ್ತು ಯುನೈಟೆಡ್ ಅರಬ್ ಎಮಿರೇಟ್ಸ್ ಜೊತೆ ಭಾರತ ದ್ವಿಪಕ್ಷೀಯ ಚರ್ಚೆಗಳನ್ನು ನಡೆಸಿತು.

**********

ಅಂದಾಜುಗಿಂತ ಕಡಿಮೆ ಉತ್ಪಾದನೆಯ ಹೊರತಾಗಿಯೂ, ದೇಶೀಯ ಬೇಡಿಕೆಯನ್ನು ಪೂರೈಸಲು ದೇಶದಲ್ಲಿ ಸಾಕಷ್ಟು ಸಕ್ಕರೆ ದಾಸ್ತಾನು ಲಭ್ಯವಿದೆ ಎಂದು ಸರ್ಕಾರ ತಿಳಿಸಿದೆ.

ಇತ್ತೀಚಿನ ಸಕ್ಕರೆ ಬೆಲೆ ಏರಿಕೆಯನ್ನು ಗಮನದಲ್ಲಿಟ್ಟುಕೊಂಡು, ಸಾಕಷ್ಟು ಸಕ್ಕರೆ ಲಭ್ಯತೆಯನ್ನು ಖಚಿತಪಡಿಸಿಕೊಳ್ಳಲು ಮತ್ತು ಗ್ರಾಹಕರಿಗೆ ಸ್ಥಿರ ಬೆಲೆಗಳನ್ನು ಕಾಯ್ದುಕೊಳ್ಳಲು ಸರ್ಕಾರ ಹಲವಾರು ಕ್ರಮಗಳನ್ನು ತೆಗೆದುಕೊಂಡಿದೆ. ಗ್ರಾಹಕ ವ್ಯವಹಾರಗಳು, ಆಹಾರ ಮತ್ತು ನಾಗರಿಕ ಪೂರೈಕೆ ಸಚಿವಾಲಯವು ಪರಿಸ್ಥಿತಿಯನ್ನು ಸೂಕ್ಷ್ಮವಾಗಿ ಗಮನಿಸುತ್ತಿದೆ ಎಂದು ಸರ್ಕಾರ ತಿಳಿಸಿದೆ. ಇತ್ತೀಚಿನ ವಾರಗಳಲ್ಲಿ ಸಕ್ಕರೆ ಬೆಲೆಗಳು ಏರಿಕೆಯಾಗಿದ್ದು, ಕಳೆದ ತಿಂಗಳು ೨೦ರಂದು ಪ್ರತಿ ಕೆಜಿಗೆ ೪೮ ರೂಪಾಯಿಗೆ, ಸುಮಾರು ೫೫ ರೂಪಾಯಿಗೆ ಏರಿದೆ.

**********

ಬಿಡಬ್ಲ್ಯುಎಫ್ ಬ್ಯಾಡ್ಮಿಂಟನ್ ವಿಶ್ವ ಚಾಂಪಿಯನ್‌ಶಿಪ್‌ನಲ್ಲಿ, ಭಾರತದ ಮಹಿಳಾ ಡಬಲ್ಸ್ ಜೋಡಿ ತ್ರೀಸಾ ಜಾಲಿ ಮತ್ತು ಗಾಯತ್ರಿ ಗೋಪಿಚಂದ್ ಸೆಮಿಫೈನಲ್‌ನಲ್ಲಿಂದು ಸೆಣಸಲಿದ್ದಾರೆ. ದೆಹಲಿಯ ಇಂದಿರಾ ಗಾಂಧಿ ಒಳಾಂಗಣ ಕ್ರೀಡಾಂಗಣದಲ್ಲಿ ನಡೆಯುವ ಪಂದ್ಯದಲ್ಲಿ ಚೀನಾದ ಲಿಯು ಶೆಂಗ್ ಶು ಮತ್ತು ಟಾನ್ ನಿಂಗ್ ಅವರನ್ನು ಎದುರಿಸಲಿದ್ದಾರೆ. ನಿನ್ನೆ ನಡೆದ ಪಂದ್ಯದಲ್ಲಿ ಭಾರತೀಯ ಜೋಡಿ, ನಾಲ್ಕನೇ ಶ್ರೇಯಾಂಕದ ಚೀನಾದ ಜಿಯಾ ಯಿ ಫ್ಯಾನ್ ಮತ್ತು ಜಾಂಗ್ ಶು ಕ್ಸಿಯಾನ್ ಅವರನ್ನು ೧೬-೨೧, ೨೧-೧೫, ೨೧-೧೩ ಸೆಟ್‌ಗಳಿಂದ ಪರಾಭವಗೊಳಿಸಿದರು. ಈ ಗೆಲುವಿನೊಂದಿಗೆ, ತ್ರೀಸಾ ಜಾಲಿ ಮತ್ತು ಗಾಯತ್ರಿ ಗೋಪಿಚಂದ್ ಪ್ರತಿಷ್ಠಿತ ಚಾಂಪಿಯನ್‌ಶಿಪ್‌ನಲ್ಲಿ ಭಾರತಕ್ಕೆ ಪದಕವನ್ನು ಖಚಿತಪಡಿಸಿದ್ದಾರೆ. ಕಳೆದ ೧೫ ವರ್ಷಗಳಲ್ಲಿ ವಿಶ್ವ ಚಾಂಪಿಯನ್‌ಶಿಪ್‌ನಲ್ಲಿ ಮಹಿಳಾ ಡಬಲ್ಸ್ ಸ್ಪರ್ಧೆಯಲ್ಲಿ ಇದು ಭಾರತದ ಮೊದಲ ಪದಕವಾಗಿದೆ. ಗೆಲುವು ಕುರಿತು ತ್ರೀಸಾ ಜಾಲಿ ಮತ್ತು ಗಾಯತ್ರಿ ಗೋಪಿಚಂದ್ ಸಂತೋಷ ವ್ಯಕ್ತಪಡಿಸಿದ್ದಾರೆ. ತಮ್ಮ ಕಠಿಣ ಹೋರಾಟದಿಂದ ಗೆಲುವು ಸಾಧ್ಯವಾಗಿ, ಸೆಮಿಫೈನಲ್ ಪ್ರವೇಶಿಸಿರುವುದಾಗಿ ಎಂದು ಹೇಳಿದ್ದಾರೆ.

**********